ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 125 (32)
ಸದಸ್ಯರ ಹೆಸರು : ಶ್ರೀ ಕೆ.ಎ ತಿಪ್ಪೇಸ್ವಾಮಿ (ನಾಮನಿರ್ದೇಶನ ಹೊಂದಿದವರು)
ಉತ್ತರಿಸುವ ದಿನಾಂಕ : 15.07.2024
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

ಕ್ರ.ಸಂ	ಪ್ರಶ್ನೆ	ಉತ್ತರ
ಅ)	ರಾಜ್ಯದಲ್ಲಿ ಸರ್ಕಾರಿ ಮತ್ತು ಖಾಸಗಿ ಶಾಲೆಗಳ ನಡುವೆ 5,8 ಮತ್ತು 9ನೇ ತರಗತಿ ಮಕ್ಕಳಿಗೆ ಬೋರ್ಡ್ ಪರೀಕ್ಷೆ, ಜಟಾಪಟಿ ಮತ್ತು ನ್ಯಾಯಾಲಯದ ಭಿನ್ನ ತೀರ್ಪುಗಳ ನಡುವೆ ವಿದ್ಯಾರ್ಥಿಗಳು ತೊಂದರೆಗೆ ಒಳಗಾಗಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಹಾಗಿದ್ದಲ್ಲಿ ಪೂರ್ಣ ವಿವರ ನೀಡವುದು;	ರಾಜ್ಯದಲ್ಲಿ 5, 8 ಮತ್ತು 9ನೇ ತರಗತಿಗಳಿಗೆ ನಡೆಸಿದ ಮೌಲ್ಯಾಂಕನದ ಸಂಬಂಧ ನ್ಯಾಯಾಲಯದ ಭಿನ್ನ ತೀರ್ಪುಗಳಿಂದಾಗಿ ವಿದ್ಯಾರ್ಥಿಗಳಿಗೆ ತೊಂದರೆಯಾಗಿರುವುದಿಲ್ಲ. ಆಯುಕ್ತರ ಕಛೇರಿಯ ಜ್ಞಾಪನ ಸಂಖ್ಯೆ:1383814 DPI-CPI0C7-3(HCC)/4/2024 ದಿನಾಂಕ:20-05-2024 ರಂತೆ 2023-2024ನೇ ಸಾಲಿನ 5, 8 ಮತ್ತು 9ನೇ ತರಗತಿ SA-2 ಮೌಲ್ಯಾಂಕನವನ್ನು ತಡೆಹಿಡಿದಿರುವ ಹಿನ್ನೆಲೆಯಲ್ಲಿ ವಿದ್ಯಾರ್ಥಿಗಳ ಶೈಕ್ಷಣಿಕ ಹಿತದೃಷ್ಟಿಯಿಂದ ಈಗಾಗಲೇ ಶಾಲೆಗಳಲ್ಲಿ ನಡೆದಿರುವ FA-1, FA-2, FA-3, FA-4 ಮತ್ತು SA-1 ಮೌಲ್ಯಾಂಕನದ ಆಧಾರದ ಮೇಲೆ ಮಕ್ಕಳನ್ನು ಮುಂದಿನ ಶೈಕ್ಷಣಿಕ ತರಗತಿಗೆ ಮುಂದುವರೆಸಲು ಅವಕಾಶ ಕಲ್ಪಿಸಲಾಗಿರುತ್ತದೆ.
ಆ)	ರಾಜ್ಯದಲ್ಲಿನ ಶಾಲಾ ಮಕ್ಕಳಿಗೆ ಮೌಲ್ಯಂಕನ ಪರೀಕ್ಷೆ ಬೇಕು ಎಂದು ಕರ್ನಾಟಕ ಹೈಕೋರ್ಟ್ ತೀರ್ಪು ನೀಡಿದೆಯೇ; ಹಾಗಿದ್ದಲ್ಲಿ, ಈ ತೀರ್ಪಿನ ಸಾರಾಂಶಗಳು ಯಾವುವು; ಪೂರ್ಣ ಮಾಹಿತಿ ನೀಡುವುದು;	• 5, 8 ಮತ್ತು 9ನೇ ತರಗತಿಯ ಮೌಲ್ಯಾಂಕನವನ್ನು ಆಕ್ಷೇಪಿಸಿ "ಅನುದಾನರಹಿತ ಮಾನ್ಯತೆ ಪಡೆದ ಶಾಲೆಗಳ ಸಂಸ್ಥೆ" ರವರು ಮಾನ್ಯ ಉಚ್ಚ ನ್ಯಾಯಾಲಯದಲ್ಲಿ ರಿಟ್ ಪಿಟಿಷನ್ ಸಂಖ್ಯೆ: 26489/2023 ಮತ್ತು ರಿಟ್ ಪಿಟಿಷನ್ ಸಂಖ್ಯೆ: 24745/2023 ದಾವೆಯನ್ನು ದಾಖಲಿಸಿದ್ದು, ಸದರಿ ದಾವೆಗಳಿಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯ ಏಕ ಸದಸ್ಯ ಪೀಠವು 5, 8 ಮತ್ತು 9ನೇ ತರಗತಿಯ ಮೌಲ್ಯಾಂಕನವನ್ನು ತಡೆಹಿಡಿಯಲು ದಿನಾಂಕ 06-03-2024ರಂದು ತೀರ್ಪು ನೀಡಿರುತ್ತದೆ.
ಇ)	ರಾಜ್ಯದ ಹೈಕೋರ್ಟ್‌ನ ವಿಭಾಗೀಯ ಪೀಠದ ತೀರ್ಪಿನ ವಿರುದ್ಧ ಖಾಸಗಿ ಶಾಲೆಗಳು ಸುಪ್ರೀಂ ಕೋರ್ಟ್ ಮೆಟ್ಟಿಲು ಏರಿದ್ದು, ಶಾಲಾ ಮಕ್ಕಳಲ್ಲಿ ಮತ್ತು ಪೋಷಕರಲ್ಲಿ ಗೊಂದಲವುಂಟಾಗಿ ಕೋರ್ಟ್‌ನ ತೀರ್ಪು ಹೊರ ಬಿದ್ದಿದೆಯೇ;	
ಈ)	ಹಾಗಿದ್ದಲ್ಲಿ, ಸುಪ್ರೀಂಕೋರ್ಟ್‌ನ ತೀರ್ಪಿನ ಅನ್ವಯ ರಾಜ್ಯ ಸರ್ಕಾರ ಶಿಕ್ಷಣ ಇಲಾಖೆಯಲ್ಲಿ ಕೈಗೊಂಡಿರುವ ಸುಧಾರಣಾ ಕ್ರಮಗಳು ಯಾವುವು? (ಪೂರ್ಣ ಮಾಹಿತಿ ನಿಡುವುದು)	• ಮಾನ್ಯ ನ್ಯಾಯಾಲಯವು ದಿನಾಂಕ: 06/03/2024ರಂದು ನೀಡಿರುವ ತೀರ್ಪನ್ನು ಪ್ರಶ್ನಿಸಿ ಇಲಾಖೆ ಸಲ್ಲಿಸಿರುವ ಮೇಲ್ಮನವಿ ರಿಟ್ ಅಪೀಲು ಸಂಖ್ಯೆ:379/2024 ಮತ್ತು 380/2024ಗೆ ಸಂಬಂಧಿಸಿದಂತೆ ಮಾನ್ಯ ಉಚ್ಚ ನ್ಯಾಯಾಲಯ ವಿಭಾಗೀಯ ಸದಸ್ಯ ಪೀಠವು ಮಧ್ಯಂತರ ತಡೆಯಾಜ್ಞೆಯನ್ನು ನೀಡಿ 2023-24 ನೇ ಸಾಲಿನ ಮೌಲ್ಯಾಂಕನವನ್ನು ಮುಂದುವರೆಸುವಂತೆ ಹಾಗೂ ಮುಂದಿನ ಸಾಲಿನಲ್ಲಿ ಸದರಿ ಮೌಲ್ಯಾಂಕನವನ್ನು ನಡೆಸುವಾಗ ಭಾಗೀದಾರರೊಂದಿಗೆ ಚರ್ಚಿಸಿ ತೀರ್ಮಾನ

		ತೆಗೆದುಕೊಳ್ಳುವಂತೆ ದಿನಾಂಕ:22/03/2024 ರಂದು ತೀರ್ಪು ನೀಡಿರುತ್ತದೆ. • ಮಾನ್ಯ ಉಚ್ಚ ನ್ಯಾಯಾಲಯ ವಿಭಾಗೀಯ ಸದಸ್ಯ ಪೀಠವು ದಿನಾಂಕ 22/03/2024 ನೀಡಿರುವ ರಂದು ತೀರ್ಪುನ್ನು ಪುಶ್ನಿಸಿ "ಅನುದಾನರಹಿತ ಮಾನ್ಯತೆ ಪಡೆದ ಶಾಲೆಗಳ ಸಂಸ್ಥೆ " ಮತ್ತು ಇತರರು ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ಎಸ್.ಎಲ್.ಪಿ ಸಂಖ್ಯೆ: 8142/2024, 8136/2024 ಮತ್ತು 8127/2024 ದಾವೆಯನ್ನು ದಾಖಲಿಸಿರುತ್ತವೆ. • ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ದಾಖಲಾಗಿರುವ ಸದರಿ ಪ್ರಕರಣಗಳು ವಿಚಾರಣಾ ಹಂತದಲ್ಲಿರುತ್ತದೆ.

ಸಂಖ್ಯೆ:ಇಪಿ 182 ಎಸ್ಎಲ್‌ಬಿ 2024

(ಎಸ್. ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.